ಕರ್ನಾಟಕ ವಿಧಾನ ಸಭೆ ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ        ದಿನಾಂಕ : DATE : 17/03/2020

# ಕನ್ನಡದ ಕಟ್ಟಾಳು ಪಾಟೀಲ ಪುಟ್ಟಪ್ಪ ನಿಧನ

**ಹುಬ್ಬಳ್ಳಿ:** ಪತ್ರಿಕೋದ್ಯಮ, ಸಾಹಿತ್ಯ ರಚನೆ ಮತ್ತು ಕನ್ನಡ ಹೋರಾಟದಲ್ಲಿ ಗಣ್ಯರಾದ ಡಾ.ಪಾಟೀಲ ಪುಟ್ಟಪ್ಪ ಅವರು ಸೋಮವಾರ ರಾತ್ರಿ ಇಲ್ಲಿಯ ಕಿಮ್ಸ್ ಆಸ್ಪತ್ರೆಯಲ್ಲಿ ನಿಧನ ಹೊಂದಿದರು. ಪಾಪು ಎಂದೇ ಪ್ರಸಿದ್ಧರಾಗಿದ್ದ ಅವರಿಗೆ 100 ವರ್ಷವಾಗಿತ್ತು. ವಯೋಸಹಜ ಕಾಯಿಲೆ ಹಾಗೂ ಇತ್ತೀಚೆಗೆ ಮನೆಯಲ್ಲಿ ಬಿದ್ದು ತಲೆಗೆ ಪೆಟ್ಟಾಗಿದ್ದರಿಂದ ತಿಂಗಳ ಹಿಂದೆ ಅವರನ್ನು ಕಿಮ್ಸ್‌ಗೆ ದಾಖಲಿಸಲಾಗಿತ್ತು. ಅವರಿಗೆ ಪುತ್ರ, ಇಬ್ಬರು ಪುತ್ರಿಯರು, ಅಪಾರ ಬಂಧು ಬಳಗ, ಅಸಂಖ್ಯಾತ ಪತ್ರಿಕೋದ್ಯಮ ಹಾಗೂ ಕನ್ನಡ ಅಭಿಮಾನಿಗಳಿದ್ದಾರೆ.



ರಾಜ್ಯಸಭಾ ಸದಸ್ಯ, ಕನ್ನಡ ಕಾವಲು ಸಮಿತಿ ಪ್ರಥಮ ಅಧ್ಯಕ್ಷರು, ಅಖಿಲ ಭಾರತ ಸಾಹಿತ್ಯ ಸಮ್ಮೇಳನ ಅಧ್ಯಕ್ಷರು, ರಾಜ್ಯೋತ್ಸವ, ನಾಡೋಜ ಮತ್ತಿತರ ಪ್ರಮುಖ ಪ್ರಶಸ್ತಿಗಳಿಗೆ ಭಾಜನರಾಗಿದ್ದ ಅವರನ್ನು 2017ನೇ ಸಾಲಿನ ರಾಷ್ಟ್ರೀಯ ಬಸವ ಪುರಸ್ಕಾರಕ್ಕೆ ಆಯ್ಕೆ ಮಾಡಲಾಗಿತ್ತು. ಕಾರಣಾಂತರದಿಂದ ಪ್ರದಾನವಾಗದೆ ಇದ್ದ ಈ ಪ್ರಶಸ್ತಿಯನ್ನು ಮಾ.17ರಂದು ಅವರಿಗೆ ಕಿಮ್ಸ್ ಆಸ್ಪತ್ರೆಯಲ್ಲೇ ನೀಡಲು ಸಿದ್ಧತೆ ನಡೆದಿತ್ತು.

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ಹಾಲಿ ಅಧ್ಯಕ್ಷರಾಗಿದ್ದರು. 1967ರಿಂದ ನಿರಂತರವಾಗಿ ಅಧ್ಯಕ್ಷರಾಗಿದ್ದು ಅವರ ಹೆಗ್ಗಳಿಕೆ. 1962ರಲ್ಲಿ ರಾಜ್ಯಸಭೆ ಸದಸ್ಯರಾಗಿ ಆಯ್ಕೆಯಾಗಿದ್ದರು.

14-1- 1921ರಂದು ಹಾವೇರಿ ತಾಲೂಕು ಕುರಬಗೊಂಡದಲ್ಲಿ ಸಿದ್ಧಲಿಂಗಪ್ಪ ಹಾಗೂ ಮಲ್ಲಮ್ಮ ದಂಪತಿಗೆ ಜನಿಸಿದ ಪುಟ್ಟಪ್ಪ, ಹಲಗೇರಿಯಲ್ಲಿ ಪ್ರಾಥಮಿಕ ಶಿಕ್ಷಣ ಪೂರೈಸಿ ನಂತರ ಬ್ಯಾಡಗಿ, ಹಾವೇರಿ, ಧಾರವಾಡದಲ್ಲಿ ಹೆಚ್ಚಿನ ವಿದ್ಯಾಭ್ಯಾಸ ಮಾಡಿದರು. 1930ರಲ್ಲಿ 'ನಹಿ ರಖನಾ ನಹಿ ರಖನಾ ಅಂಗ್ರೇಜ ಸರಕಾರ' ಎಂದು ಹೇಳುತ್ತ ಮದ್ಯದ ಅಂಗಡಿಗಳ ಮುಂದೆ ಪಿಕೆಟಿಂಗ್ ಮಾಡಿದ್ದು, ಜವಾಹರಲಾಲ್ ನೆಹರೂ ಹುಬ್ಬಳ್ಳಿಗೆ ಬಂದಾಗ ಅವರನ್ನು ನೋಡಿ ಪ್ರಭಾವಿತರಾದದ್ದು, 1930ರಿಂದ ಸಂಪೂರ್ಣ ಖಾದಿ ಧಾರಣೆ. 1934ರಲ್ಲಿ ಮಹಾತ್ಮ ಗಾಂಧೀಜಿ ಹರಿಜನ ಪ್ರವಾಸ ಕೈಕೊಂಡು ಬ್ಯಾಡಗಿಗೆ ಬಂದಾಗ ಸ್ವಯಂ ಸೇವಕನಾಗಿದ್ದಾಗ ಅವರಿಂದ ಬೆನ್ನು ತಟ್ಟಿಸಿಕೊಂಡ ಅನುಭವ ಇವರು ಹೊಂದಿದ್ದರು.

1939ರಲ್ಲಿ ಧಾರವಾಡದಲ್ಲಿ ಕಾಲೇಜು ಶಿಕ್ಷಣ, ಅದೇ ವರ್ಷ ಉಡುಪಿಯ ಅಂತರಂಗ ಪತ್ರಿಕೆಯಲ್ಲಿ ಶ್ರೀರಂಗ, ಕುವೆಂಪು, ಬೇಂದ್ರೆಯವರ ಮೇಲೆ ಲೇಖನ ಬರೆದರು. 1942ರಲ್ಲಿ ಕರ್ನಾಟಕ ಕಾಲೇಜಿನ ಕರ್ನಾಟಕ ಸಂಘದ ಕಾರ್ಯದರ್ಶಿಯಾದರು. 1942ರಲ್ಲಿ ರಾಷ್ಟ್ರೀಯ ಹೋರಾಟದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳ ಸಂಘಟನೆ ಮಾಡಿದ ಆಪಾದನೆಗಾಗಿ ಅವರನ್ನು ಕರ್ನಾಟಕ ಕಾಲೇಜಿನಿಂದ ಹೊರಹಾಕಿದರು. ಒಂದು ವರ್ಷ ಭೂಗತ ಕಾರ್ಯಕರ್ತರಾಗಿ ಕೆಲಸ ಮಾಡಿದರು. 1945ರಲ್ಲಿ ಹೈಕೋರ್ಟಿನಲ್ಲಿ ವಕಾಲತ್ತು ಮಾಡುವ ಉದ್ದೇಶದಿಂದ ಮುಂಬಯಿಗೆ ಹೋಗಿದ್ದರು. ಅಲ್ಲಿ ಪತ್ರಿಕೋದ್ಯಮದಲ್ಲಿ ತೊಡಗಿಕೊಳ್ಳಲು ಸರದಾರ ಪಟೇಲರು ಹೇಳಿದ್ದರು.

**ಪ್ರಶಸ್ತಿಗಳು:** 1976ರಲ್ಲಿ ರಾಜ್ಯೋತ್ಸವ ಪ್ರಶಸ್ತಿ, ಟಿ.ಎಸ್.ಆರ್. ಪತ್ರಿಕೋದ್ಯಮ ಪ್ರಶಸ್ತಿ, ಕರ್ನಾಟಕ ವಿಶ್ವವಿದ್ಯಾಲಯದ ಡಿ.ಲಿಟ್ ಗೌರವ, ಹಂಪಿ ವಿಶ್ವವಿದ್ಯಾಲಯದ ನಾಡೋಜ ಪ್ರಶಸ್ತಿ, ಟಿಳಕ ಮೊಹರೆ ಪ್ರಶಸ್ತಿ, ಮಾಳವಾಡ ಪ್ರಶಸ್ತಿ ಸೇರಿ ಅನೇಕ ಪ್ರಶಸ್ತಿಗಳು ಇವರನ್ನು ಅರಸಿ ಬಂದಿವೆ.

**ಗಣ್ಯರ ಸಂತಾಪ:** ಪಾಟೀಲ ಪುಟ್ಟಪ್ಪ ನಿಧನಕ್ಕೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮನು ಬಳಿಗಾರ್ ಮತ್ತಿತರ ಗಣ್ಯರು ಸಂತಾಪ ಸೂಚಿಸಿದ್ದಾರೆ.